ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಮೆಸ್ಕೋ ವಕ್ಫ್ ಸಂಸ್ಥೆಯ ಶಿಕ್ಷಕರಿಗೆ ಬಾಕಿ ವೇತನ ಪಾವತಿ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

439(572) ಮಾನ್ಯ ಪಶುಸಂಗೋಪನೆ ಹಾಗೂ ಹಜ್ & ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಕ್ಫ್ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಮೆಸ್ಕೋ ವಕ್ಫ್ ಸಂಸ್ಥೆಯ ಕೈಗಾರಿಕಾ ತರಬೇತಿ ಸಂಸ್ಥೆ ಹಾಗೂ ಶಾಲೆಗಳ ಸಂಖ್ಯೆ ಎಷ್ಟು;(ವಿವರ ನೀಡುವುದು)

(ಆ) ಕೋವಿಡ್-19ರ ಹಿನ್ನಲೆಯಲ್ಲಿ ಸದರಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರಿಗೆ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಎಷ್ಟು ತಿಂಗಳುಗಳ ಹಾಗೂ ಎಷ್ಟು ಬಾಕಿ ವೇತನ ಪಾವತಿಸಬೇಕಾಗಿದೆ;

(ಈ) ಬಾಕಿ ವೇತನ ಪಾವತಿಸುವಲ್ಲಿನ ವಿಳಂಬಕ್ಕೆ ಕಾರಣಗಳೇನು;

(ಉ) ಯಾವ ಕಾಲಮಿತಿಯಲ್ಲಿ ಬಾಕಿ ವೇತನ ಪಾವತಿಸಲಾಗುವುದು?